ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-01**

ಸಂಖ್ಯೆ:ಇ-ಆಡಳಿತ/ಶಿಕ್ಷಕ ಮಿತ್ರ/2020-21 ದಿನಾಂಕ:25-06-2021

-:ಸುತ್ತೋಲೆ:-

ವಿಷಯ: ಶಿಕ್ಷಕರ ವರ್ಗಾವಣೆ ಹಿನ್ನಲೆಯಲ್ಲಿ ಶಿಕ್ಷಕರ ಸೇವಾ ಮಾಹಿತಿಯನ್ನು ಪರಿಶೀಲಿಸಿ ಶಿಕ್ಷಕ ಮಿತ್ರ (EEDS) ತಂತ್ರಾಂಶದಲ್ಲಿ ಇಂದೀಕರಿಸುವ ಬಗ್ಗೆ.

ಉಲ್ಲೇಖ: ಈ ಕಛೇರಿ ಪತ್ರ ಸಂಖ್ಯೆ: ಇ-ಆಡಳಿತ/ಶಿಕ್ಷಕ ಮಿತ್ರ/2020-21 ದಿನಾಂಕ:17-06-2021

*****

ರಾಜ್ಯದ ಎಲ್ಲಾ ಸರ್ಕಾರಿ ಪ್ರಾಥಮಿಕ, ಪ್ರೌಢಶಾಲಾ ಸಹ ಶಿಕ್ಷಕರು, ಮುಖ್ಯ ಶಿಕ್ಷಕರು ಹಾಗೂ ಬೋಧಕೇತರ ಸಿಬ್ಬಂದಿಗಳ ಸೇವಾ ಮಾಹಿತಿಯನ್ನು ಶಿಕ್ಷಕ ಮಿತ್ರ (EEDS) ತಂತ್ರಾಂಶದಲ್ಲಿ ಇಂದೀಕರಿಸಲು ಸಾಕಷ್ಟು ಕಾಲಾವಕಾಶವನ್ನು ನೀಡಲಾಗಿದ್ದರೂ ಸಹ ಹಲವಾರು ಡಿ.ಡಿ.ಓ ಗಳು ತಮ್ಮ ಅಧೀನ ಶಾಲೆ/ಕಛೇರಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರಾಥಮಿಕ/ಪ್ರೌಢಶಾಲಾ ವೃಂದದ ಶಿಕ್ಷಕರು, ಮುಖ್ಯ ಶಿಕ್ಷಕರುಗಳು ಹಾಗೂ ಬೋಧಕೇತರ ಸಿಬ್ಬಂಧಿಗಳ ಮಾಹಿತಿ ತಿದ್ದುಪಡಿಕೋರಿ ಮನವಿಗಳನ್ನು ಸಲ್ಲಿಸುತ್ತಿರುವುದು ವಿಷಾದನೀಯ. ಆದ್ದರಿಂದ ದಿನಾಂಕ:30-06-2021 ರೊಳಗೆ ಶಿಕ್ಷಕ ಮಿತ್ರ ತಂತ್ರಾಂಶದಲ್ಲಿ ಎಲ್ಲಾ ಮಾಹಿತಿಗಳನ್ನು ತಿದ್ದುಪಡಿ ಮಾಡಲು ತಿಳಿಸಿದೆ. ತದನಂತರ ಯಾವುದೇ ಮಾಹಿತಿ ತಿದ್ದುಪಡಿಗೆ ಅವಕಾಶ ಕಲ್ಪಿಸಲಾಗುವುದಿಲ್ಲ. ಹಾಗೂ ಈ ಕೆಳಕಂಡ ಅಂಶಗಳು ಪೂರ್ಣಗೊಂಡಿರುವ ಬಗ್ಗೆ ಖಾತ್ರಿಪಡಿಸಿಕೊಳ್ಳುವುದು.

- ಡಿ.ಡಿ.ಓ ಗಳು ತಮ್ಮ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲಾ ಶಿಕ್ಷಕರ/ಅಧಿಕಾರಿಗಳ/ಬೋಧಕೇತರ ಸಿಬ್ಬಂಧಿಗಳ ಮಾಹಿತಿ ಸಂಪೂರ್ಣವಾಗಿ ಇಂದೀಕರಣಗೊಂಡಿರುವ ಬಗ್ಗೆ ಖಾತ್ರಿಪಡಿಸಕೊಳ್ಳತಕ್ಕದ್ದು. ಹಾಗೂ ಇಂದೀಕರಣಗೊಳಿಸಿದ ಬಗ್ಗೆ ದೃಡೀಕರಣ ಪಡೆಯುವುದು.
- ಹೊಸದಾಗಿ ನೇಮಕಗೊಂಡ ಶಿಕ್ಷಕರ/ಅಧಿಕಾರಿಗಳ/ಬೋಧಕೇತರ ಸಿಬ್ಬಂಧಿಗಳ ಮಾಹಿತಿಯನ್ನು ಇಂದೀಕರಿಸುವುದು.
- ಟ್ರಾನ್ಸ್‌ಫರ್ ಇನ್ ಔಟ್ ನಲ್ಲಿ ರಿಲಿಸ್ಸ್ಯನ್, ಟ್ರಾನ್ಸ್‌ಫರ್ ಇನ್ ಆಗದೇ ಉಳಿದಿರುವ ಸಿಬ್ಬಂಧಿಗಳ ಮಾಹಿತಿಯನ್ನು ಪರಿಶೀಲಿಸಿ ಇಂಧೀಕರಿಸುವುದು.

ಈ ಕಾರ್ಯವನ್ನು ರಾಜ್ಯದ ಎಲ್ಲಾ ಉಪನಿರ್ದೇಶಕರು ಹಾಗೂ ಡಿ.ಡಿ.ಓ ಗಳು ಪ್ರಥಮ ಆದ್ಯತೆ ಮೇರೆಗೆ ನಿರ್ವಹಿಸುವುದು. ಶಿಕ್ಷಕರ/ಅಧಿಕಾರಿಗಳ/ಬೋದಕೇತರ ಸಿಬ್ಬಂಧಿಗಳ ಸೇವಾ ಮಾಹಿತಿಯಲ್ಲಿ ತಪ್ಪುಗಳಾಗಿರುವ ಬಗ್ಗೆ ಅಥವಾ ಆ ಕಾರಣದಿಂದ ವರ್ಗಾವಣೆ ಅಥವಾ ಇತರೆ ಸೇವಾ ಸೌಲಭ್ಯಗಳಿಂದ ವಂಚಿತರಾಗಿರುವ ಬಗ್ಗೆ ಯಾವುದೇ ದೂರುಗಳು ಈ ಕಛೇರಿಗೆ ಸ್ವೀಕೃತವಾದಲ್ಲಿ ಸಂಬಂಧಿಸಿದ

ಉಪನಿರ್ದೇಶಕರು(ಆಡಳಿತ) ಹಾಗೂ ಡಿ.ಡಿ.ಓ ರವರನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದೆಂದು ಈ ಮೂಲಕ ಮತ್ತೊಮ್ಮೆ ತಿಳಿಸಿದೆ.

ಸಂಬಂಧಿಸಿದಂತೆ ಯಾವುದೇ ತಾಂತ್ರಿಕ ಗೊಂದಲಗಳಿದ್ದಲ್ಲಿ ವಿವರವನ್ನು karonlineserviceshelp@gmail.com ಗೆ ಈ-ಮೇಲ್ ಮುಖೇನ ಸಲ್ಲಿಸಿ ಪರಿಹಾರ ಕಂಡುಕೊಳ್ಳಲು ಈ ಮೂಲಕ ತಿಳಿಸಿದೆ.

[ವಿ ಅನ್ಬುಕುಮಾರ್]
ಆಯುಕ್ತರು

**ಪ್ರತಿಯನ್ನು**:

1. ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಅಭಿಯಾನ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಗೌರವಪೂರ್ವಕವಾಗಿ ಸಲ್ಲಿಸಿದೆ.

**ಇವರಿಗೆ,**

1. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ ರವರ ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ರವರ ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
3. ನಿರ್ದೇಶಕರು (ಪ್ರಾಥಮಿಕ ಶಿಕ್ಷಣ), ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
4. ನಿರ್ದೇಶಕರು (ಪ್ರೌಢಶಿಕ್ಷಣ) ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
5. ನಿರ್ದೇಶಕರು(ಡಿ.ಎಸ್.ಇ.ಆರ್.ಟಿ), ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
6. ನಿರ್ದೇಶಕರು ಕ.ಪ್ರೌ.ಶಿ.ಪ.ಮಂಡಳಿ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
7. ನಿರ್ದೇಶಕರು ಇತರೆ ಪರೀಕ್ಷೆಗಳು, ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
8. ನಿರ್ದೇಶಕರು ಕ.ಪ.ಪು.ಸಂಘ(ರಿ), ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
9. ನಿರ್ದೇಶಕರು ಸಿಸ್ಲೆಪ್ , ಧಾರವಾಡ ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
10. ವಿಭಾಗೀಯ ಜಂಟಿ ನಿರ್ದೇಶಕರು, ಬೆಂಗಳೂರು, ಮೈಸೂರು, ಬೆಳಗಾಂ, ಕಲ್ಬುರ್ಗಿ ವಿಭಾಗ ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
11. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ) ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
12. ರಾಜ್ಯದ ಎಲ್ಲಾ ಉಪನಿರ್ದೇಶಕರು(ಅಭಿವೃದ್ಧಿ) ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
13. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
14. ರಾಜ್ಯದ ಎಲ್ಲಾ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರಿಗೆ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ)
15. ಹಿರಿಯ ಸಹಾಯಕ ನಿರ್ದೇಶಕರು(ಆನ್ ಲೈನ್ ಸೇವೆಗಳು), ಆಯುಕ್ತರ ಕಛೇರಿ, ಬೆಂಗಳೂರು ಇವರಿಗೆ ಸೂಕ್ತ ಕ್ರಮಕ್ಕಾಗಿ
16. ಕಛೇರಿ ಪ್ರತಿ.